**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಹೊನ್ನಾವರ. ಸಿ.ಸಿ ನಂ.596-2024.**

| | |
|---|---|
| ಪಿರ್ಯಾದುದಾರರುಃ- | ದಿ. ಜನತಾ ಕೋ-ಆಫ್ ಕ್ರೆಡಿಟ್ ಸೊಸೈಟಿ ನಿಯಮಿತ<br>ಭಟ್ಕಳ , ಶಾಖೆ ಉಪ್ಪೋಣಿ ,<br>ಪ್ರತಿನಿಧಿಸುವವರು,<br>ಶ್ರೀ ಗುರು ರಾಮ ನಾಯ್ಕ,<br>ವಯಸ್ಸು ಸುಮಾರುಃ- 38 ವರ್ಷ,<br>ನಿಷ್ಪತ್ ಶಾಖಾ ವ್ಯವಸ್ಥಾಪಕರು,<br>ತಾಲೂಕುಃ- ಭಟ್ಕಳ (ಉ.ಕ). |

**-ವಿರುದ್ಧ-**

| | |
|---|---|
| ಆರೋಪಿಯ ಹೆಸರುಃ- | ಶ್ರೀಮತಿ ಸುಜಾತಾ ಕ್ಷೇತ್ರ ಅಂಬಿಗ ,<br>ಸಾಕೀನಃ- ಬೇಲೆಕೇರಿ ,<br>ಮಾವಿನಕುರ್ವಾ ,<br>ತಾಲೂಕುಃ- ಹೊನ್ನಾವರ (ಉ.ಕ). |

**ಆಪಾದನೆ**

ಶ್ರೀ ಈರಣ್ಣ ಹುಣಶಿಕಟ್ಟಿ, ಬಿ.ಕಾಂ., ಎಲ್.ಎಲ್.ಬಿ., ಪ್ರಭಾರ ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯಾದ ನಾನು ಆರೋಪಿಯಾದ ನಿಮ್ಮ ಮೇಲೆ ಈ ಕೆಳಕಂಡ ಆಪಾದನೆ ಹೊರಿಸುತ್ತಿದ್ದೇನೆ.

ದಿನಾಂಕ 30-03-2024 ರಂದು ಆರೋಪಿಯಾದ ನೀವು ಪಿರ್ಯಾದಿ ಸಂಸ್ಥೆಯಲ್ಲಿ ರೂ.74,000/- ಗಳನ್ನು ಸಾಲವಾಗಿ ಪಡೆದುಕೊಂಡಿದ್ದು, ಸದರಿ ಸಾಲದ ಮರುಪಾವತಿಗಾಗಿ ನೀವು ಪಿರ್ಯಾದಿ ಸಂಸ್ಥೆಯ ಹೆಸರಿಗೆ ನಿಮ್ಮ ಬ್ಯಾಂಕ್ ಖಾತೆಯುಳ್ಳ **ಕೆನರಾ ಬ್ಯಾಂಕ್., ಮಾವಿನಕುರ್ವಾ** ಶಾಖೆಯ ಚೆಕ್ ನಂ.437948 ನ್ನು ದಿನಾಂಕ 19-04-2024 ರಂದು ರೂ.74,650/- ಎಂದು ನಮೂದಿಸಿ ಚೆಕ್ ಗೆ ಸಹಿ ಮಾಡಿಕೊಟ್ಟು, ಸದರಿ ಚೆಕ್ ನ್ನು ಬ್ಯಾಂಕ್ ಗೆ ಹಾಜರುಪಡಿಸಿದ ಕೂಡಲೇ ಹಣ ಸಿಗುತ್ತದೆ ಎಂದು ಭರವಸೆ ನೀಡಿದ್ದು, ಅದರಂತೆ ಪಿರ್ಯಾದಿಯವರು ಹಣ ಪಡೆಯುವ ಸಲುವಾಗಿ ಸದರಿ ಚೆಕನ್ನು ಅವರ ಸಂಸ್ಥೆಯ ಖಾತೆಯಿರುವ **ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ., ಕುದ್ರಿಗಿ** ಶಾಖೆಯಲ್ಲಿ ಹಾಜರುಪಡಿಸಿದಾಗ, ಸದರಿ ಬ್ಯಾಂಕ್ ನವರು, “Funds Insufficient” ಎಂದು ತಿಳಿಸಿ ಸದರಿ ಚೆಕನ್ನು ದಿನಾಂಕ

26-04-2024 ರಂದು ಅಮಾನ್ಯ ಮಾಡಿ ಪಿರ್ಯಾದಿ ಸಂಸ್ಥೆಗೆ ತಿಳಿಸಿರುತ್ತಾರೆ. ಈ ಕುರಿತು ಪಿರ್ಯಾದಿಯವರು ನಿಮಗೆ ವಕೀಲರ ಮೂಲಕ ದಿನಾಂಕ 17-05-2024 ರಂದು ರಿಜಿಸ್ಟರ್ ನೋಟಿಸ್ ಕಳುಹಿಸಿದ್ದು, ಸದರಿ ನೋಟಿಸನ್ನು ದಿನಾಂಕ 18-05-2024 ರಂದು ಜಾರಿಯಾಗಿದ್ದರೂ ಸಹ ನೀವು ಸದರಿ ಚೆಕ್ ನಲ್ಲಿ ನಮೂದಿಸಿದ ಹಣವನ್ನು ಸಹ ನೀಡದೇ ನೆಗೋಶಿಯೇಬಲ್ ಇನ್ ಸ್ಟ್ರುಮೆಂಟ್ ಕಾಯಿದೆ ಕಲಂ. 138 ರಡಿಯಲ್ಲಿ ಶಿಕ್ಷಾರ್ಹ ಅಪರಾಧ ಮಾಡಿರುತ್ತೀರೆಂದು ಆರೋಪಿಸಲಾಗಿದೆ.

ಪ್ರಶ್ನೆ1: ಈಗ ನಿಮಗೆ ಓದಿ ಹೇಳಿದ ಆಪಾದನೆ ತಿಳಿಯಿತೇ?

ಆರೋಪಿಯ ಉತ್ತರ : ತಿಳಿಯಿತು.

ಪ್ರಶ್ನೆ 2: ಸದ್ರಿ ಆಪಾದನೆಯನ್ನು ಒಪ್ಪಿಕೊಳ್ಳುವಿರಾ ಅಥವಾ ವಿಚಾರಣೆಯಾಗಬೇಕೇ?

ಆರೋಪಿಯ ಉತ್ತರ : ವಿಚಾರಣೆಯಾಗಬೇಕು.

( ಈ ಮೂಲಕ ಪ್ರಮಾಣಿಸುವುದೇನೆಂದರೆ ಆರೋಪಿಯು ಕೊಟ್ಟಂತ ಹೇಳಿಕೆಯ ಉತ್ತರವನ್ನು ಪಡೆಯಲಾಗಿದೆ )

ಸಹಿ ಇದೆ.

**ದಿನಾಂಕಃ- 04-12-2024.**

**(ಈರಣ್ಣ ಹುಣಶಿಕಟ್ಟಿ).,**
**ಪ್ರಭಾರ ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಮ್.ಎಫ್.ಸಿ.ರವರ ನ್ಯಾಯಾಲಯ.,ಹೊನ್ನಾವರ.**

ಆರೋಪಿಯ ಸಹಿಃ-

ಸಹಿ ಇದೆ.

****